# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 436 |
| ಮಾನ್ಯ ವಿಧಾನ ಪರಿಷತ್ ಸದಸ್ಯರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | ದಿನಾಂಕ: 16.02.2023 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ರಾಜ್ಯದಲ್ಲಿ ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಪ, ಕೈಗಾರಿಕಾ ವಿನಾಶ ಮುಂತಾದವುಗಳಿಗೆ ತುತ್ತಾದವರಿಗೆ ಯಾವ ರೀತಿಯಾಗಿ ಕಾನೂನು ಸೇವೆಯನ್ನು ಒದಗಿಸಲಾಗುವುದು; (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಪ ಕೈಗಾರಿಕೆ ವಿನಾಶ ಮುಂತಾದವುಗಳಿಗೆ ತುತ್ತಾದವರಿಗೆ ಕಾನೂನು ಸೇವಾ ಪ್ರಾಧಿಕಾರದ ಅಧಿನಿಯಮ, 1987ರ ಅಧ್ಯಾಯ IVರ ಪ್ರಕರಣ 12ರಲ್ಲಿ ಕಾನೂನು ಸೇವೆ ಒದಗಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಅದರನ್ವಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಪತ್ತು ನಿರ್ವಹಣಾ ಅಧಿಕಾರಿಗಳು ಮತ್ತು ಇತರೆ ಇಲಾಖೆಗಳ ಹಾಗೂ ಸ್ವಯಂ ಸೇವಾ ಸಂಸ್ಥೆಗಳು (NGO's) ಮತ್ತು ಅರೆಕಾಲಿಕ ಕಾನೂನು ಸ್ವಯಂ ಸೇವಕರ (PLV's) ಸಹಯೋಗದೊಂದಿಗೆ ರಾಜ್ಯದ ಎಲ್ಲಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಹಾಗೂ ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳ ಮೂಲಕ **ಕಾನೂನು ಅರಿವು ಮತ್ತು ಕಾನೂನು ನೆರವು** ಸೇವೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಈ ನಿಟ್ಟಿನಲ್ಲಿ ಹಾಗೂ ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ **ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಕೆ.ಎನ್. ಕೇಶವನಾರಾಯಣ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಶ್ರೀಮತಿ ದಾಕ್ಷಾಯಿಣಿ ಜಿ.ಕೆ., ನ್ಯಾಯಾಂಗ ಅಧಿಕಾರಿ, ಹೆಚ್.ಎಲ್.ಸಿ, ಡಿಪಿಆರ್, ಕೃಷಿ ಇಲಾಖೆ** ಇವರನ್ನೊಳಗೊಂಡ ಒಂದು ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ದಿನಾಂಕ: 26.07.2021, 14.07.2022 ಮತ್ತು 07.09.2022ರಂದು ಸಭೆಗಳನ್ನು ನಡೆಸಿ ಸೂಕ್ತ ಮಾರ್ಗದರ್ಶನ ನೀಡಿರುತ್ತದೆ. |

<table>
<tr><td>(ಆ)</td><td>ರಾಜ್ಯದಲ್ಲಿ ಮತೀಯ ಕಾರಣದಿಂದ ದೌರ್ಜನ್ಯಕ್ಕೆ ಬಲಿಯಾದವರ ಕುಟುಂಬಗಳಿಗೆ ಉಚಿತ ಕಾನೂನು ನೆರವು ಒದಗಿಸಲಾಗಿದೆಯೇ; ಹೌದಾದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಉಚಿತ ನೆರವನ್ನು ಒದಗಿಸಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)</td><td>ರಾಜ್ಯದಲ್ಲಿ ಮತೀಯ ಕಾರಣದಿಂದ ದೌರ್ಜನ್ಯಕ್ಕೆ ಬಲಿಯಾದವರ ಕುಟುಂಬಗಳಿಗೆ ಕಾನೂನು ಸೇವಾ ಪ್ರಾಧಿಕಾರದ ಅಧಿನಿಯಮ, 1987ರ ಅಧ್ಯಾಯ IVರ ಪ್ರಕರಣ 12ರ ಪ್ರಕಾರ ಉಚಿತ ಕಾನೂನು ನೆರವನ್ನು ಒದಗಿಸಲಾಗಿದ್ದು / ಒದಗಿಸಲಾಗುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಉಚಿತ ನೆರವನ್ನು ಒದಗಿಸಿರುವ ಪ್ರಕರಣಗಳ ಮಾಹಿತಿ ಈ ಕೆಳಕಂಡಂತಿದೆ:<br>
<table>
<tr><th>ಕ್ರ.ಸಂ.</th><th>ವರ್ಷ</th><th>ಪ್ರಕರಣ ಸಂಖ್ಯೆ</th></tr>
<tr><td>1</td><td>2020</td><td>01</td></tr>
<tr><td>2</td><td>2021</td><td>05</td></tr>
<tr><td>3</td><td>2022</td><td>--</td></tr>
</table></td></tr>
<tr><td>(ಇ)</td><td>ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಯಾವ ರೀತಿಯಾಗಿ ಕಾನೂನು ಸಾಕ್ಷರತೆ ಸೇವೆಯನ್ನು ಒದಗಿಸಲಾಗುವುದು; (ಸಂಪೂರ್ಣ ವಿವರವನ್ನು ಒದಗಿಸುವುದು)</td><td>ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ತನ್ನ ಅಧೀನದಲ್ಲಿ ಬರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳ ಮೂಲಕ ಕಾನೂನು ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದು, ಈ ದಿಸೆಯಲ್ಲಿ ಮಹಿಳೆ ಮತ್ತು ಕಾನೂನು, ಮಹಿಳೆಯರ ಆಸ್ತಿ ಹಕ್ಕು, ಜನನ ಮತ್ತು ಮರಣ ನೋಂದಣಿ ಕಾಯ್ದೆ, ಮೋಟಾರು ವಾಹನ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಹಿಂದೂ ವಾರಸ ಕಾಯ್ದೆ, ಮಹಿಳಾ ದೌರ್ಜನ್ಯ ತಡೆ ಕಾಯ್ದೆ, ಶಿಕ್ಷಣದ ಹಕ್ಕು ಕಾಯ್ದೆ, ಮಾಹಿತಿ ಹಕ್ಕು ಕಾಯ್ದೆ ಹಾಗೂ ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ಕಾನೂನು ಸಾಕ್ಷರತಾ ಸೇವೆಗಳನ್ನು ಒದಗಿಸಲಾಗುತ್ತಿದೆ.</td></tr>
<tr><td>(ಈ)</td><td>ಕಾನೂನು ಸೇವಾ ಪ್ರಾಧಿಕಾರದ ಅಧಿನಿಯಮ 1987ರ ಅಧ್ಯಾಯ 12ರ ಪ್ರಕಾರ ಉಚಿತ ಕಾನೂನು ಸೇವೆಯನ್ನು ಪಡೆಯುವ ವ್ಯಕ್ತಿಗಳಲ್ಲಿ ಹಿರಿಯ ನಾಗರೀಕರಿಗೆ ಸೌಲಭ್ಯ ಇಲ್ಲದಿರುವುದರಿಂದ ಇತ್ತೀಚಿನ ದಿನಗಳಲ್ಲಿ ಹಿರಿಯ ನಾಗರೀಕರಿಗೆ ಉಚಿತ ಕಾನೂನು ಸೇವೆಯು ಅತ್ಯವಶ್ಯವಾಗಿರುವ ಹಿನ್ನೆಲೆಯಲ್ಲಿ ಹಿರಿಯ ನಾಗರೀಕರಿಗೂ ಉಚಿತ ಕಾನೂನು ಸೌಲಭ್ಯ ಒದಗಿಸುವ ಕುರಿತು ಸರ್ಕಾರದ ನಿಲುವೇನು?</td><td>ಕಾನೂನು ಸೇವಾ ಪ್ರಾಧಿಕಾರದ ಅಧಿನಿಯಮ, 1987ರ ಅಧ್ಯಾಯ 12ರಲ್ಲಿ ಹಿರಿಯ ನಾಗರೀಕರಿಗೆ ಉಚಿತ ಕಾನೂನು ಸೇವೆ ಸೌಲಭ್ಯವನ್ನು ಒದಗಿಸುವ ಕುರಿತು ಪ್ರತ್ಯೇಕವಾಗಿ ಅವಕಾಶ ಕಲ್ಪಿಸಿರುವುದಿಲ್ಲ. ಆದರೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ (ಹಿರಿಯ ನಾಗರೀಕರಿಗೆ ಕಾನೂನು ಸೇವೆಗಳು) ಯೋಜನೆ, 2016ರಡಿಯಲ್ಲಿ ಹಿರಿಯ ನಾಗರೀಕರ ಹಕ್ಕುಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.</td></tr>
</table>

| | | |
|---|---|---|
| | | ಮುಂದುವರೆದು, ಈ ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ **ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಅಶೋಕ ಬಿ. ಹಿಂಚಿಗೇರಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಶ್ರೀ ವೆಂಕಟೇಶ್ ನಾಯಕ್ .ವಿ, ನ್ಯಾಯಾಂಗ ಅಧಿಕಾರಿ, ಹೆಚ್.ಎಲ್.ಸಿ., ನಗರಾಭಿವೃದ್ಧಿ ಇಲಾಖೆ** ಇವರನ್ನೊಳಗೊಂಡ ಒಂದು ಸಮಿತಿಯನ್ನು ರಚಿಸಿದ್ದು, ಈ ಸಮಿತಿಯು ದಿನಾಂಕ: 09.05.2021 ಮತ್ತು 29.01.2022ರಂದು ಸಭೆ ನಡೆಸಿ ಸೂಕ್ತ ಮಾರ್ಗದರ್ಶನವನ್ನು ನೀಡಿರುತ್ತದೆ.<br><br>ಅಲ್ಲದೆ ಹಿರಿಯ ನಾಗರೀಕರಿಂದ ಉಚಿತ ಕಾನೂನು ನೆರವು / ಸಲಹೆ ಕೋರಿ ದೂರು / ಸಲಹೆಗಳು ಬಂದಲ್ಲಿ ಅದನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುವುದು. |

**ಸಂಖ್ಯೆ: ಲಾ-ಎಲ್ಎಡಿ/54/2023**

**(ಜೆ.ಸಿ. ಮಾಧುಸ್ವಾಮಿ)**
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು